ಕರ್ನಾಟಕ ಸರ್ಕಾರ

# ಶಾಲಾ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು.

ಸಂಖ್ಯೆ: ಎಡಿಎಂ2(1)/ರಾ.ಮ.ಶಿ.ದಿ/2023/2023-24. ದಿನಾಂಕ: 07-08-2023.

-:ಜ್ಞಾಪನ:-

ವಿಷಯ:-2023-24 ನೇ ಸಾಲಿನ (ದಿನಾಂಕ:05.09.2023 ರಂದು ಆಚರಿಸಲಾಗುವ) ರಾಜ್ಯ ಮಟ್ಟದ ಶಿಕ್ಷಕರ ದಿನಾಚರಣೆ ಮತ್ತು ರಾಜ್ಯ ಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿ ಪ್ರದಾನ ಸಮಾರಂಭದ ಪೂರ್ವ ಸಿದ್ಧತೆ ಮಾಡಿಕೊಳ್ಳುವ ಬಗ್ಗೆ.

ಉಲ್ಲೇಖ:-ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬೆಂಗಳೂರು ರವರು ಈ ಏಕ ಕಡತದ ಕಂಡಿಕೆ (04) ರಲ್ಲಿ ನೀಡಿರುವ ಅನುಮೋದನೆಯಂತೆ.

KSPSTA Blore

********

ವಿಷಯಕ್ಕೆ ಸಂಬಂಧಿಸಿದಂತೆ, 2023-24 ನೇ ಸಾಲಿನ ರಾಜ್ಯ ಮಟ್ಟದ ಶಿಕ್ಷಕರ ದಿನಾಚರಣೆ ಮತ್ತು ರಾಜ್ಯ ಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿ ಪ್ರದಾನ ಸಮಾರಂಭ ಕಾರ್ಯಕ್ರಮವನ್ನು ಉಲ್ಲೇಖದ ಅನುಸಾರ ದಿನಾಂಕ: 05.09.2023 ರ ಮಂಗಳವಾರದಂದು ಬೆಂಗಳೂರಿನ ವಿಧಾನಸೌಧದ ಬ್ಯಾಂಕ್ವೆಟ್ ಸಭಾಂಗಣದಲ್ಲಿ ಸರಳವಾಗಿ, ಸುರಕ್ಷಿತವಾಗಿ ಮತ್ತು ಅರ್ಥಪೂರ್ಣವಾಗಿ, ರೂ. 15,00,000/- ಗಳ ಅಂದಾಜು ವೆಚ್ಚದಲ್ಲಿ ಆಯೋಜಿಸಿ, ನಿರ್ವಹಿಸಲು ಉಲ್ಲೇಖದ ಅನುಸಾರ ತೀರ್ಮಾನಿಸಲಾಗಿದೆ.

ಸರದಿಯಂತೆ ಈ ಬಾರಿ ಉಪನಿರ್ದೇಶಕರು(ಆಡಳಿತ), ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ಉತ್ತರ ಜಿಲ್ಲೆ, ಕೆ.ಜಿ. ರಸ್ತೆ, ಬೆಂಗಳೂರು ಈ ಕಛೇರಿ ವತಿಯಿಂದ, ಉಪನಿರ್ದೇಶಕರು, ಕರ್ನಾಟಕ ರಾಜ್ಯ ಶಿಕ್ಷಕರ ಕಲ್ಯಾಣ ನಿಧಿ & ವಿದ್ಯಾರ್ಥಿಗಳ ಕ್ಷೇಮಾಭಿವೃದ್ಧಿ ನಿಧಿ(ಟಿಬಿಎಫ್), ಶಿಕ್ಷಕರ ಸದನ, ಕೆ.ಜಿ. ರಸ್ತೆ, ಬೆಂಗಳೂರು ಇವರ ಸಹಭಾಗಿತ್ವದಲ್ಲಿ ಸದರಿ ಕಾರ್ಯಕ್ರಮವನ್ನು ಯಶಸ್ವಿಯಾಗಿ ಆಯೋಜಿಸಿ, ನಿರ್ವಹಿಸಬೇಕಾಗಿರುತ್ತದೆ.

ಪ್ರಯುಕ್ತ ಉಪನಿರ್ದೇಶಕರು(ಆಡಳಿತ), ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ಉತ್ತರ ಜಿಲ್ಲೆ, ಕೆ.ಜಿ. ರಸ್ತೆ, ಬೆಂಗಳೂರು ಮತ್ತು ಉಪನಿರ್ದೇಶಕರು, ಕರ್ನಾಟಕ ರಾಜ್ಯ ಶಿಕ್ಷಕರ ಕಲ್ಯಾಣ ನಿಧಿ & ವಿದ್ಯಾರ್ಥಿಗಳ ಕ್ಷೇಮಾಭಿವೃದ್ಧಿ ನಿಧಿ (ಟಿಬಿಎಫ್), ಶಿಕ್ಷಕರ ಸದನ, ಕೆ.ಜಿ. ರಸ್ತೆ, ಬೆಂಗಳೂರು ಇವರುಗಳು ಸದರಿ ಕಾರ್ಯಕ್ರಮವನ್ನು ಯಶಸ್ವಿಯಾಗಿ ಮತ್ತು ಸುಸೂತ್ರವಾಗಿ ಆಯೋಜಿಸಿ ನಿರ್ವಹಿಸಲು ಅವಶ್ಯವಿರುವ ಕೆಳಕಂಡ ಪೂರ್ವ ತಯಾರಿಗಳನ್ನು / ಸಿದ್ಧತೆಯನ್ನು ಮಾಡಿಕೊಳ್ಳಲು ಸೂಚಿಸಿದೆ.

1. ರಾಜ್ಯ ಮಟ್ಟದ ಶಿಕ್ಷಕರ ದಿನಾಚರಣೆ ಹಾಗೂ ರಾಜ್ಯ ಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿ ಪ್ರದಾನ ಸಮಾರಂಭ ರಾಜ್ಯ ಸರ್ಕಾರದ ಮಹತ್ತರವಾದ ಮತ್ತು ಪ್ರತಿಷ್ಠಿತವಾದ ಕಾರ್ಯಕ್ರಮವಾಗಿರುತ್ತದೆ. ಅದನ್ನು 2023-24 ನೇ ಸಾಲಿನಲ್ಲಿ ಸನ್ಮಾನ್ಯ ಮುಖ್ಯ ಮಂತ್ರಿಗಳ, ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖಾ ಸಚಿವರ, ಸ್ಥಳೀಯ & ಇತರ ಜನಪ್ರತಿನಿಧಿಗಳ ಹಾಗೂ ಹಿರಿಯ ಇಲಾಖಾಧಿಕಾರಿಗಳ ಸಮ್ಮುಖದಲ್ಲಿ ದಿನಾಂಕ: 05-09-2023 ರ ಮಂಗಳವಾರದಂದು ಪೂರ್ವಾಹ್ನ 10.00 ಗಂಟೆಯಿಂದ 1.30 ರ ಅವಧಿಯಲ್ಲಿ ಕಳೆದ ಮೂರು ವರ್ಷಗಳಂತೆ, ವಿಧಾನ ಸೌಧದ ಬ್ಯಾಂಕ್ವೆಟ್ ಸಭಾಂಗಣದಲ್ಲಿ

KSPSTA
Blore

ಶಾಲಾ ಶಿಕ್ಷಣ ಇಲಾಖೆಯ ವತಿಯಿಂದ, ಪದವಿ ಪೂರ್ವ ಶಿಕ್ಷಣ ಇಲಾಖೆಯ ಸಹಯೋಗದಲ್ಲಿ, ಸರಳವಾಗಿ, ಸುರಕ್ಷಿತವಾಗಿ ಮತ್ತು ಅರ್ಥಪೂರ್ಣವಾಗಿ, ರಾಜ್ಯ ಪ್ರಶಸ್ತಿ ಪುರಸ್ಕೃತ ಶಿಕ್ಷಕರ & ಅವರ ಕುಟುಂಬದ ಸೀಮಿತ ಸದಸ್ಯರ, ಕೆಲವು ಶಿಕ್ಷಕರ ಹಾಗೂ ಮಾಧ್ಯಮ ಪ್ರತಿನಿಧಿಗಳ ಭಾಗವಹಿಸುವಿಕೆಯೊಂದಿಗೆ ಆಚರಿಸಲು ಉಲ್ಲೇಖದ ಅನುಸಾರ ತೀರ್ಮಾನಿಸಲಾಗಿದ್ದು, ಅದರಂತೆ ಎಲ್ಲಾ ಅಗತ್ಯ ಸಿದ್ಧತೆಗಳನ್ನು ಉಪನಿರ್ದೇಶಕರು(ಆಡಳಿತ), ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ಉತ್ತರ ಜಿಲ್ಲೆ, ಕೆ.ಜಿ. ರಸ್ತೆ, ಬೆಂಗಳೂರು ಇವರು ಮಾಡಿಕೊಳ್ಳತಕ್ಕದ್ದು.

2. ಸದರಿ ಕಾರ್ಯಕ್ರಮವನ್ನು ಯಾವುದೇ ಲೋಪವಾಗದಂತೆ, ಸರ್ಕಾರದ & ಶಾಲಾ ಶಿಕ್ಷಣ ಇಲಾಖೆಯ ಘನತೆಗೆ ಚ್ಯುತಿ ಬಾರದಂತೆ ಸಮರ್ಪಕವಾಗಿ ಆಯೋಜಿಸುವ ಸಂಪೂರ್ಣ ಜವಾಬ್ದಾರಿ ಉಪನಿರ್ದೇಶಕರು(ಆಡಳಿತ), ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ಉತ್ತರ ಜಿಲ್ಲೆ, ಕೆ.ಜಿ. ರಸ್ತೆ, ಬೆಂಗಳೂರು ಇವರದ್ದಾಗಿದ್ದು, ಸದರಿ ಕಾರ್ಯದಲ್ಲಿ ಉಪನಿರ್ದೇಶಕರು, ಕರ್ನಾಟಕ ರಾಜ್ಯ ಶಿಕ್ಷಕರ ಕಲ್ಯಾಣ ನಿಧಿ & ವಿದ್ಯಾರ್ಥಿಗಳ ಕ್ಷೇಮಾಭಿವೃದ್ಧಿ ನಿಧಿ(ಟಿಬಿಎಫ್), ಬೆಂಗಳೂರು ಇವರನ್ನು ಸಹ ತೊಡಗಿಸಿ ಕೊಳ್ಳಲು ಅಗತ್ಯ ಕ್ರಮಗಳನ್ನು ವಹಿಸುವಂತೆ ಉಪನಿರ್ದೇಶಕರು(ಆಡಳಿತ), ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ಉತ್ತರ ಜಿಲ್ಲೆ, ಕೆ.ಜಿ. ರಸ್ತೆ, ಬೆಂಗಳೂರು ಇವರಿಗೆ ತಿಳಿಸಲಾಗಿದೆ.

3. ಸದರಿ ಕಾರ್ಯಕ್ರಮವನ್ನು ಶಾಲಾ ಶಿಕ್ಷಣ ಇಲಾಖೆಯ ವತಿಯಿಂದ ಉಪನಿರ್ದೇಶಕರು(ಆಡಳಿತ), ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ಉತ್ತರ ಜಿಲ್ಲೆ, ಕೆ.ಜಿ. ರಸ್ತೆ, ಬೆಂಗಳೂರು ಇವರು ಸರದಿಯಂತೆ ಈ ಬಾರಿ ಕೆ.ಟಿ.ಪಿ.ಪಿ ಮತ್ತಿತರ ಅನ್ವಯಿಕ ನಿಯಮಗಳನ್ನು ಪಾಲಿಸಿ ಆಯೋಜಿಸಿ ನಿರ್ವಹಿಸಬೇಕಾಗಿದ್ದು, ಅದರಂತೆ ನಿಯಮಾನುಸಾರ ಅಗತ್ಯ ಕ್ರಮಗಳನ್ನು ವಹಿಸುವಂತೆ ಉಪನಿರ್ದೇಶಕರು(ಆಡಳಿತ), ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ಉತ್ತರ ಜಿಲ್ಲೆ, ಕೆ.ಜಿ. ರಸ್ತೆ, ಬೆಂಗಳೂರು ಇವರಿಗೆ ಹಾಗೂ ಉಪನಿರ್ದೇಶಕರು, ಕರ್ನಾಟಕ ರಾಜ್ಯ ಶಿಕ್ಷಕರ ಕಲ್ಯಾಣ ನಿಧಿ & ವಿದ್ಯಾರ್ಥಿಗಳ ಕ್ಷೇಮಾಭಿವೃದ್ಧಿ ನಿಧಿ (ಟಿಬಿಎಫ್), ಬೆಂಗಳೂರು ಇವರುಗಳಿಗೆ ತಿಳಿಸಲಾಗಿದೆ.

4. ಸದರಿ ಕಾರ್ಯಕ್ರಮಕ್ಕೆ ಅಗತ್ಯ ಸರಕು-ಸೇವೆಗಳನ್ನು ಪಡೆಯುವಾಗ ಕೆ.ಟಿ.ಪಿ.ಪಿ ಮತ್ತಿತರ ಅನ್ವಯಿಕ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸುವಂತೆ, ಈ ಸಂಬಂಧ ಆಯುಕ್ತರ ಕಛೇರಿಯ ಮುಖ್ಯ ಲೆಕ್ಕಾಧಿಕಾರಿಗಳ ಸಲಹೆ, ಸೂಚನೆ ಮತ್ತು ಮಾರ್ಗದರ್ಶನವನ್ನು ಪಡೆದು ಅದರಂತೆ ಸೂಕ್ತ ಕ್ರಮಗಳನ್ನು ವಹಿಸುವಂತೆ ಉಪನಿರ್ದೇಶಕರು(ಆಡಳಿತ), ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ಉತ್ತರ ಜಿಲ್ಲೆ, ಕೆ.ಜಿ. ರಸ್ತೆ, ಬೆಂಗಳೂರು ಮತ್ತು ಉಪನಿರ್ದೇಶಕರು, ಕರ್ನಾಟಕ ರಾಜ್ಯ ಶಿಕ್ಷಕರ ಕಲ್ಯಾಣ ನಿಧಿ & ವಿದ್ಯಾರ್ಥಿಗಳ ಕ್ಷೇಮಾಭಿವೃದ್ಧಿ ನಿಧಿ(ಟಿಬಿಎಫ್), ಬೆಂಗಳೂರು ಇವರುಗಳಿಗೆ ತಿಳಿಸಲಾಗಿದೆ.

5. ಸನ್ಮಾನ್ಯ ಮುಖ್ಯ ಮಂತ್ರಿಗಳನ್ನು, ಮಾನ್ಯ ಶಿಕ್ಷಣ ಸಚಿವರನ್ನು, ಸ್ಥಳೀಯ ಶಾಸಕರನ್ನು ಹಾಗೂ ಇತರ ಜನಪ್ರತಿನಿಧಿಗಳನ್ನು ಸದರಿ ಕಾರ್ಯಕ್ರಮದಲ್ಲಿ ಭಾಗವಹಿಸಲು

KSPSTA
Blore

ಶಿಷ್ಟಾಚಾರದಂತೆ ಕೋರಲು. ಸದರಿ ದಿನಕ್ಕೆ ಅವರುಗಳ ಸಮಯಾವಕಾಶವನ್ನು ಸಾಕಷ್ಟು ಮುಂಚಿತವಾಗಿ ನಿಗದಿಪಡಿಸಿಕೊಳ್ಳಲು ಅಗತ್ಯ ಕ್ರಮಗಳನ್ನು ವಹಿಸಲು. ಉಪನಿರ್ದೇಶಕರು(ಆಡಳಿತ). ಶಾಲಾ ಶಿಕ್ಷಣ ಇಲಾಖೆ. ಬೆಂಗಳೂರು ಉತ್ತರ ಜಿಲ್ಲೆ. ಕೆ.ಜಿ. ರಸ್ತೆ. ಬೆಂಗಳೂರು ಇವರಿಗೆ ತಿಳಿಸಲಾಗಿದೆ.

6. ರಾಜ್ಯ ಶಿಷ್ಟಾಚಾರದ ಅನುಸಾರ ಆಮಂತ್ರಣ ಪತ್ರಿಕೆ ಮುದ್ರಿಸಿ ಅನುಮೋದನೆ ಪಡೆದುಕೊಂಡು. ಸನ್ಮಾನ್ಯ ಮುಖ್ಯ ಮಂತ್ರಿಗಳಿಗೆ. ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖಾ ಸಚಿವರಿಗೆ. ಸ್ಥಳೀಯ & ಇತರ ಜನಪ್ರತಿನಿಧಿಗಳಿಗೆ ಶಿಷ್ಟಾಚಾರದಂತೆ ವಿತರಿಸಲು ಅಗತ್ಯ ಕ್ರಮಗಳನ್ನು ವಹಿಸಲು. ಉಪನಿರ್ದೇಶಕರು(ಆಡಳಿತ). ಶಾಲಾ ಶಿಕ್ಷಣ ಇಲಾಖೆ. ಬೆಂಗಳೂರು ಉತ್ತರ ಜಿಲ್ಲೆ. ಕೆ.ಜಿ. ರಸ್ತೆ. ಬೆಂಗಳೂರು ಇವರಿಗೆ ತಿಳಿಸಲಾಗಿದೆ.

7. ಸದರಿ ಕಾರ್ಯಕ್ರಮದ ಕಾರ್ಯಸೂಚಿಯನ್ನು(ಪ್ರಾರ್ಥನೆಯಿಂದ ವಂದನಾರ್ಪಣೆಯವರೆಗೆ) ಕಳೆದ ಮೂರು ವರ್ಷಗಳಂತೆ ಎಲ್ಲಾ ಅಗತ್ಯ ಅಂಶಗಳನ್ನು ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸಲು ಅನುವಾಗುವಂತೆ ಸಿದ್ಧಪಡಿಸಿಕೊಳ್ಳಲು ಅಗತ್ಯ ಕ್ರಮಗಳನ್ನು ವಹಿಸಲು. ಉಪನಿರ್ದೇಶಕರು(ಆಡಳಿತ). ಶಾಲಾ ಶಿಕ್ಷಣ ಇಲಾಖೆ. ಬೆಂಗಳೂರು ಉತ್ತರ ಜಿಲ್ಲೆ. ಕೆ.ಜಿ. ರಸ್ತೆ. ಬೆಂಗಳೂರು ಇವರಿಗೆ ತಿಳಿಸಲಾಗಿದೆ.

8. ಸದರಿ ಕಾರ್ಯಕ್ರಮವನ್ನು ಸಮರ್ಪಕವಾಗಿ ಆಯೋಜಿಸಿ. ನಿರ್ವಹಿಸಲು ಅನುವಾಗುವಂತೆ ಸದರಿ ಕಾರ್ಯಕ್ರಮದ ಜವಾಬ್ದಾರಿಗಳನ್ನು ಹಿರಿಯ ಇಲಾಖಾಧಿಕಾರಿಗಳಿಗೆ ಹಂಚಿಕೆ ಮಾಡಿ. ಹಿರಿಯ ಇಲಾಖಾಧಿಕಾರಿಗಳ ನೇತೃತ್ವದಲ್ಲಿ ವಿವಿಧ ಸಮಿತಿಗಳನ್ನು ನೇಮಕ ಮಾಡಲು ಅಗತ್ಯ ಕ್ರಮಗಳನ್ನು ವಹಿಸಲು. ಉಪನಿರ್ದೇಶಕರು(ಆಡಳಿತ). ಶಾಲಾ ಶಿಕ್ಷಣ ಇಲಾಖೆ. ಬೆಂಗಳೂರು ಉತ್ತರ ಜಿಲ್ಲೆ. ಕೆ.ಜಿ. ರಸ್ತೆ. ಬೆಂಗಳೂರು ಇವರಿಗೆ ತಿಳಿಸಲಾಗಿದೆ.

9. ದೂರದರ್ಶನ–ಚಂದನ ವಾಹಿನಿ ಅಥವಾ ಇತರ ಸಾಮಾಜಿಕ ಜಾಲತಾಣಗಳಲ್ಲಿ ಸದರಿ ಕಾರ್ಯಕ್ರಮವನ್ನು ನೇರಪ್ರಸಾರ ಮಾಡುವ ಬಗ್ಗೆ ನಿರ್ದೇಶಕರು. ಡಿ.ಎಸ್.ಇ.ಆರ್.ಟಿ., ಬೆಂಗಳೂರು ಇವರ ಮಾರ್ಗದರ್ಶನದಲ್ಲಿ ಅಗತ್ಯ ಕ್ರಮಗಳನ್ನು ವಹಿಸಲು. ಉಪನಿರ್ದೇಶಕರು(ಆಡಳಿತ). ಶಾಲಾ ಶಿಕ್ಷಣ ಇಲಾಖೆ. ಬೆಂಗಳೂರು ಉತ್ತರ ಜಿಲ್ಲೆ. ಕೆ.ಜಿ. ರಸ್ತೆ. ಬೆಂಗಳೂರು ಇವರಿಗೆ ತಿಳಿಸಲಾಗಿದೆ.

10. **ಕಾರ್ಯಕ್ರಮದ ವೆಚ್ಚದ ಬಗ್ಗೆ:–ಈ ಕಾರ್ಯಕ್ರಮವನ್ನು ಆಯೋಜಿಸಲು ತಗಲುವ ಅಂದಾಜು ವೆಚ್ಚದ ವಿವರ ಕೆಳಕಂಡಂತಿದೆ.**

| | |
|---|---|
| 1. **ಕಾರ್ಯಕ್ರಮದ ಆಯೋಜನೆಗಾಗಿ (ಅಂದಾಜು ಮೊತ್ತ)** | **ರೂ. 15,00,000/–** |
| 2. **ರಾಷ್ಟ್ರ ಪ್ರಶಸ್ತಿ ಪುರಸ್ಕೃತರಿಗೆ ನಗದು ಪುರಸ್ಕಾರಕ್ಕಾಗಿ (ಅಂದಾಜು) (3 * 50,000)** | **ರೂ. 1,50,000/–** |

KSPSTA
Blore

3. ರಾಜ್ಯ ಪ್ರಶಸ್ತಿ ಪುರಸ್ಕೃತರಿಗೆ ನಗದು ಪುರಸ್ಕಾರಕ್ಕಾಗಿ (31 * 25,000) — ರೂ. 7,75,000/-

4. ರಾಜ್ಯ ಪ್ರಶಸ್ತಿ ಪುರಸ್ಕೃತರು ಕರ್ತವ್ಯ ನಿರ್ವಹಿಸುತ್ತಿರುವ ಶಾಲೆಗಳ ಅಭಿವೃದ್ಧಿಗಾಗಿ ಪ್ರತಿ ಶಾಲೆಗೆ ರೂ. 50,000/- ದಂತೆ ( 31 * 50,000) — ರೂ. 15,50,000/-

5. ರಾಜ್ಯ ಮಟ್ಟದ ಪತ್ರಿಕೆಗಳಲ್ಲಿ ಜಾಹೀರಾತು ನೀಡಲು. (ಅಂದಾಜು) — ರೂ. 3,50,000/-

6. ದೂರದರ್ಶನದಲ್ಲಿ / ಸಾಮಾಜಿಕ ಜಲ ತಾಣಗಳಲ್ಲಿ ಸದರಿ ಕಾರ್ಯಕ್ರಮದ ನೇರಪ್ರಸಾರಕ್ಕಾಗಿ. (ಅಂದಾಜು) — ರೂ. 4,50,000/-

---

ಒಟ್ಟು — ರೂ.48,75,000/-

11. ಸದರಿ ಕಾರ್ಯಕ್ರಮವನ್ನು ಕಳೆದ ಮೂರು ವರ್ಷಗಳಲ್ಲಿ 6 ರಿಂದ 13 ಲಕ್ಷಗಳ ಆರ್ಥಿಕ ಮಿತಿಯಲ್ಲಿ ಆಯೋಜಿಸಿ, ನಿರ್ವಹಿಸಲಾಗಿದ್ದು, ಅದರಂತೆ ಈ ಬಾರಿ ಸಹ ಅಂದಾಜು ಒಟ್ಟು 15,00,000/- ಗಳ ಆರ್ಥಿಕ ಮಿತಿಯೊಳಗೆ (ಕ.ರಾ.ಶಿ.ಕ.ನಿಧಿ & ವಿ.ಕ್ಷೇ.ನಿಧಿ ವೆಚ್ಚ ಸೇರಿ) ಆಯೋಜಿಸಿ ನಿರ್ವಹಿಸಲು ಸೂಕ್ತ ಕ್ರಮಗಳನ್ನು ವಹಿಸುವಂತೆ ಮತ್ತು ಈ ಸಂಬಂಧ ಆಯವ್ಯಯನ್ನು ಸಿದ್ಧಪಡಿಸಿ (ಕ.ರಾ.ಶಿ.ಕ.ನಿಧಿ & ವಿ.ಕ್ಷೇ.ನಿಧಿ ವೆಚ್ಚ ಸೇರಿ) ಮರು-ಟಪಾಲಿನಲ್ಲಿ ಆಯುಕ್ತರಿಗೆ ಸಲ್ಲಿಸಿ, ಅನುಮೋದನೆ ಪಡೆದುಕೊಳ್ಳಲು ಅಗತ್ಯ ಕ್ರಮಗಳನ್ನು ವಹಿಸುವಂತೆ ಉಪನಿರ್ದೇಶಕರು(ಆಡಳಿತ), ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ಉತ್ತರ ಜಿಲ್ಲೆ, ಕೆ.ಜಿ. ರಸ್ತೆ, ಬೆಂಗಳೂರು ಇವರಿಗೆ ತಿಳಿಸಲಾಗಿದೆ.

12. ಸದರಿ ಕಾರ್ಯಕ್ರಮದ ಆಯೋಜನೆ ಮತ್ತು ನಿರ್ವಹಣೆಗೆ ಸಂಬಂಧಿಸಿದಂತೆ ಎರಡು-ಮೂರು ದಿನಗಳಲ್ಲಿ ಈ ಕಛೇರಿ ಹಂತದಲ್ಲಿ ಸಭೆಯನ್ನು ಆಯೋಜಿಸಲಾಗುತ್ತಿದೆ. ಪ್ರಯುಕ್ತ, ಸದರಿ ಸಭೆಯಲ್ಲಿ ಈ ಕಾರ್ಯಕ್ರಮದ ಆಯೋಜನೆ ಮತ್ತು ನಿರ್ವಹಣೆಗೆ ಸಂಬಂಧಿಸಿದ ವಿಷಯಗಳನ್ನು ಹಿರಿಯ ಇಲಾಖಾಧಿಕಾರಿಗಳ ಗಮನಕ್ಕೆ ತಂದು, ಅವರ ನಿರ್ದೇಶನದಂತೆ ಸೂಕ್ತ ಕ್ರಮಗಳನ್ನು ವಹಿಸುವಂತೆ ಉಪನಿರ್ದೇಶಕರು(ಆಡಳಿತ), ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ಉತ್ತರ ಜಿಲ್ಲೆ, ಕೆ.ಜಿ. ರಸ್ತೆ, ಬೆಂಗಳೂರು ಇವರಿಗೆ ತಿಳಿಸಲಾಗಿದೆ.

13. ಒಟ್ಟಾರೆಯಾಗಿ ಸದರಿ ಕಾರ್ಯಕ್ರಮ ರಾಜ್ಯ ಸರ್ಕಾರದ ಪ್ರತಿಷ್ಠಿತವಾದ ಮತ್ತು ಮುಖ್ಯವಾದ ಕಾರ್ಯಕ್ರಮವಾಗಿದ್ದು, ಸರ್ಕಾರದ & ಇಲಾಖೆಯ ಘನತೆಗೆ ಚ್ಯುತಿ ಬಾರದಂತೆ

KSPSTA
Blore

ಸರಳವಾಗಿ, ಸುರಕ್ಷಿತವಾಗಿ, ಅರ್ಥಪೂರ್ಣವಾಗಿ ಮತ್ತು ಯಶಸ್ವಿಯಾಗಿ ಆಯೋಜಿಸಲು ನಿಯಮಾನುಸಾರ ಅಗತ್ಯ ಕ್ರಮಗಳನ್ನು ವಹಿಸಲು ಉಪನಿರ್ದೇಶಕರು(ಆಡಳಿತ), ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ಉತ್ತರ ಜಿಲ್ಲೆ, ಕೆ.ಜಿ. ರಸ್ತೆ, ಬೆಂಗಳೂರು ಹಾಗೂ ಉಪನಿರ್ದೇಶಕರು, ಕರ್ನಾಟಕ ರಾಜ್ಯ ಶಿಕ್ಷಕರ ಕಲ್ಯಾಣ ನಿಧಿ & ವಿದ್ಯಾರ್ಥಿಗಳ ಕ್ಷೇಮಾಭಿವೃದ್ಧಿ ನಿಧಿ(ಟಿಬಿಎಫ್), ಬೆಂಗಳೂರು ಇವರುಗಳಿಗೆ ತಿಳಿಸಲಾಗಿದೆ.

14. ಈ ಸಂಬಂಧ ಅವರುಗಳಿಗೆ ಅಗತ್ಯ ಮಾರ್ಗದರ್ಶನ ನೀಡಲು ಮತ್ತು ಮೇಲುಸ್ತುವಾರಿ ಮಾಡಲು ಅಗತ್ಯ ಕ್ರಮವಹಿಸುವಂತೆ ಹಾಗೂ ಪದವಿ ಪೂರ್ವ ಶಿಕ್ಷಣ ಇಲಾಖೆಯ ಸಹಯೋಗ ಪಡೆಯಲು ಅಗತ್ಯ ಕ್ರಮವಹಿಸುವಂತೆ ನಿರ್ದೇಶಕರು(ಪ್ರಾಥಮಿಕ ಶಿಕ್ಷಣ) ರವರಿಗೆ ತಿಳಿಸಲಾಗಿದೆ.

೨೦.೧೦.೨೦೨೦

ಬಿ.ಬಿ.ಕಾವೇರಿ., ಭಾ.ಆ.ಸೇ

ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ

**ಪ್ರತಿಯನ್ನು ಮಾಹಿತಿಗಾಗಿ & ಮುಂದಿನ ಸೂಕ್ತ ಕ್ರಮಕ್ಕಾಗಿ.**

1. ಮಾನ್ಯ ಶಾಲಾ ಶಿಕ್ಷಣ & ಸಾಕ್ಷರತಾ ಇಲಾಖಾ ಹಾಗೂ ಸಕಾಲ ಸಚಿವರ ಆಪ್ತ ಕಾರ್ಯದರ್ಶಿಗಳಿಗೆ ಕಳುಹಿಸುತ್ತಾ, ಮಾನ್ಯ ಸಚಿವರ ಆದ್ಯ ಗಮನಕ್ಕೆ ತರಲು ತಿಳಿಸಿದೆ.
2. ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಕರ್ನಾಟಕ, ಬೆಂಗಳೂರು.
3. ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, 18 ನೇ ಅಡ್ಡ ರಸ್ತೆ, ಮಲ್ಲೇಶ್ವರಂ, ಬೆಂಗಳೂರು.
4. ಅಪರ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಧಾರವಾಡ / ಕಲಬುರಗಿ.
5. ನಿರ್ದೇಶಕರು, ಪ್ರೌಢ ಶಿಕ್ಷಣ, ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು.
6. ಶಾಲಾ ಶಿಕ್ಷಣ ಇಲಾಖೆಯ ಉಳಿದ ಎಲ್ಲಾ ನಿರ್ದೇಶಕರಿಗೆ.
7. ಜಂಟಿ ನಿರ್ದೇಶಕರು(ಆಡಳಿತ),ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು.
8. ಮುಖ್ಯ ಲೆಕ್ಕಾಧಿಕಾರಿಗಳು & ಆಯುಕ್ತರ ಆರ್ಥಿಕ ಸಲಹೆಗಾರರು, ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು.
9. ಉಪನಿರ್ದೇಶಕರು(ಆಡಳಿತ), ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ಉತ್ತರ ಜಿಲ್ಲೆ, ಕೆ.ಜಿ. ರಸ್ತೆ, ಬೆಂಗಳೂರು.
10. ಉಪನಿರ್ದೇಶಕರು, ಕರ್ನಾಟಕ ರಾಜ್ಯ ಶಿಕ್ಷಕರ ಕಲ್ಯಾಣ ನಿಧಿ & ವಿದ್ಯಾರ್ಥಿಗಳ ಕ್ಷೇಮಾಭಿವೃದ್ಧಿ ನಿಧಿ(ಟಿಬಿಎಫ್), ಶಿಕ್ಷಕರ ಸದನ, ಕೆ.ಜಿ. ರಸ್ತೆ, ಬೆಂಗಳೂರು.
11. ಕಛೇರಿ ಪ್ರತಿ.